ಕರ್ನಾಟಕ ಸರ್ಕಾರ
(ಕೃಷಿ ಇಲಾಖೆ)

ಕೃಷಿ ಆಯುಕ್ತರ ಕಾರ್ಯಾಲಯ, ನಂ.01, ಶೇಷಾದ್ರಿ ರಸ್ತೆ, ಬೆಂಗಳೂರು-01.

ಸಂಖ್ಯೆ:ಜಕೃನಿ(ಬೆವಿ)/LAQ-1391/2024-25 ದಿನಾಂಕ:18.07.2024

ರವರಿಗೆ,

ಸರ್ಕಾರದ ಕಾರ್ಯದರ್ಶಿಗಳು,
ಕೃಷಿ ಇಲಾಖೆ,
ಬಹುಮಹಡಿ ಕಟ್ಟಡ,
ಬೆಂಗಳೂರು.

ಮಾನ್ಯರೇ,

ವಿಷಯ: ಮಾನ್ಯ ವಿಧಾನಸಭೆಯ ಸದಸ್ಯರಾದ ಶ್ರೀ ಸುಬ್ಬಾರೆಡ್ಡಿ ಎಸ್.ಎನ್. (ಬಾಗೇಪಲ್ಲಿ) ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ:1391 ಗೆ ಉತ್ತರಿಸುವ ಕುರಿತು.

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಮಾನ್ಯ ವಿಧಾನಸಭೆಯ ಸದಸ್ಯರಾದ ಶ್ರೀ ಸುಬ್ಬಾರೆಡ್ಡಿ ಎಸ್.ಎನ್ (ಬಾಗೇಪಲ್ಲಿ) ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ:1391 ಗೆ ಮಾಹಿತಿ ಸಿದ್ಧಪಡಿಸಿ ಈ ಪತ್ರದೊಂದಿಗೆ ಲಗತ್ತಿಸಿ ಸಲ್ಲಿಸಲಾಗಿದೆ.

ತಮ್ಮ ವಿಶ್ವಾಸಿ,

ಕೃಷಿ ನಿರ್ದೇಶಕರು

ಕರ್ನಾಟಕ ವಿಧಾನಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	1391
ಪ್ರಶ್ನೆ ಕೇಳಿರುವ ವಿಧಾನಸಭೆಯ ಸದಸ್ಯರು	ಶ್ರೀ ಸುಬ್ಬಾರೆಡ್ಡಿ ಎಸ್ ಎನ್ (ಬಾಗೇಪಲ್ಲಿ)
ಉತ್ತರ ನೀಡುವ ಸಚಿವರು	ಮಾನ್ಯ ಕೃಷಿ ಸಚಿವರು
ಉತ್ತರಿಸಬೇಕಾದ ದಿನಾಂಕ	24.07.2024

ವಿಷಯ: ಬೆಳೆ ವಿಮೆ

ಕ್ರ. ಸಂ.	ಪ್ರಶ್ನೆ	ಉತ್ತರ
ಅ)	ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿ ಬೆಳೆ ಸಂಪೂರ್ಣ ನಾಶ ಆಗಿದ್ದರೂ ಬೆಳೆ ವಿಮೆ ಸರಿಯಾಗಿ ಬಾರದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿ ಬೆಳೆ ಸಂಪೂರ್ಣ ನಾಶ ಆಗಿದ್ದರೂ ಬೆಳೆ ವಿಮೆ ಸರಿಯಾಗಿ ಬಾರದೇ ಇರುವುದು ಸರ್ಕಾರದ ಗಮನಕ್ಕೆ ಬಂದಿರುವುದಿಲ್ಲ. ಪ್ರಧಾನ ಮಂತ್ರಿ ಫಸಲ್ ಬಿಮಾ ಯೋಜನೆಯ (PMFBY) ಪರಿಷ್ಕೃತ ಮಾರ್ಗಸೂಚಿಯನ್ವಯ 2023-24ನೇ ಸಾಲಿನಲ್ಲಿ ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿ ಒಟ್ಟು 41508 ಅರ್ಹ ರೈತ ಪ್ರಸ್ತಾವನೆಗಳಿಗೆ ಒಟ್ಟು ರೂ.44.14 ಕೋಟಿಗಳ ಬೆಳೆ ವಿಮೆ ಪರಿಹಾರ ಮೊತ್ತ ಮಂಜೂರಾಗಿರುತ್ತದೆ.
ಆ)	ಬೆಳೆ ಕಟಾವು ಪ್ರಯೋಗ ತಪ್ಪಾಗಿ ಮಾಡಿದ್ದ ಅಧಿಕಾರಿಗಳ ತಪ್ಪಿನಿಂದ ರೈತರಿಗೆ ಅನ್ಯಾಯವಾಗುತ್ತಿರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ;	ಬೆಳೆ ಕಟಾವು ಪ್ರಯೋಗಗಳನ್ನು ಕೈಗೊಳ್ಳಲು ಆರ್ಥಿಕ ಮತ್ತು ಸಾಂಖ್ಯಿಕ ಇಲಾಖೆಯು ನೋಡಲ್ ಸಂಸ್ಥೆಯಾಗಿರುತ್ತದೆ. 2023-24ನೇ ಸಾಲಿನ ಚಿಕ್ಕಬಳ್ಳಾಪುರ ಜಿಲ್ಲೆಯ ಬೆಳೆ ಕಟಾವು ಪ್ರಯೋಗಗಳಿಗೆ ಸಂಬಂಧಿಸಿದಂತೆ ಯಾವುದೇ ಲೋಪದೋಷಗಳು ಆರ್ಥಿಕ ಮತ್ತು ಸಾಂಖ್ಯಿಕ ನಿರ್ದೇಶನಾಲಯಕ್ಕೆ ಸ್ವೀಕೃತವಾಗಿರುವುದಿಲ್ಲ.

ಇ)	ಬೆಳೆ ವಿಮೆಯ ಹಣ ಬಾರದ ರೈತರಿಗೆ ಹಣ ಪಾವತಿ ಮಾಡಲು ಸರ್ಕಾರ ಕೈಗೊಂಡ ಕ್ರಮಗಳೇನು? (ವಿವರ ನೀಡುವುದು)	PMFBY ಮಾರ್ಗಸೂಚಿಯನ್ವಯ ನೋಂದಣಿಯಾದ ಅರ್ಹ ರೈತರಿಗೆ ಬೆಳೆ ವಿಮೆ ಪರಿಹಾರ ಮೊತ್ತ ಸಂದಾಯವಾಗುತ್ತದೆ. ಅರ್ಹ ಇಲ್ಲದ ರೈತರಿಗೆ ಬೆಳೆ ವಿಮೆ ಪರಿಹಾರ ಮೊತ್ತ ಪಾವತಿಸಲು ಸದರಿ ಮಾರ್ಗಸೂಚಿಯಲ್ಲಿ ಅವಕಾಶವಿರುವುದಿಲ್ಲ.

ಕೃಷಿ ನಿರ್ದೇಶಕರು